ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER : ಉದಯವಾಣಿ    ದಿನಾಂಕ : DATE : 08/06/2019

# ಜಗನ್ ಸಂಪುಟದಲ್ಲಿ ಐವರು ಡಿಸಿಎಂಗಳು

**ಅಮರಾವತಿ:** ದೇಶದಲ್ಲಿಯೇ ಮೊದಲ ಬಾರಿಗೆ ಎಂಬಂತೆ ವೈ.ಎಸ್.ಜಗನ್ಮೋಹನ ರೆಡ್ಡಿ ನೇತೃತ್ವದ ಆಂಧ್ರಪ್ರದೇಶದ ನೂತನ ಸರ್ಕಾರವು ಐವರು ಉಪಮುಖ್ಯಮಂತ್ರಿಗಳನ್ನು ನೇಮಕ ಮಾಡಿಕೊಂಡಿದೆ. ಶುಕ್ರವಾರ ಬೆಳಗ್ಗೆ ನಡೆದ ವೈಎಸ್‌ಆರ್ ಕಾಂಗ್ರೆಸ್‌ನ ಶಾಸಕರ ಸಭೆಯಲ್ಲಿ ಸಿಎಂ ಜಗನ್ ಈ ಅಚ್ಚರಿಯ ನಿರ್ಧಾರ ಪ್ರಕಟಿಸಿದ್ದಾರೆ.



ಜತೆಗೆ 20 ಮಂದಿ ಸಚಿವರನ್ನು ಸಂಪುಟಕ್ಕೆ ಸೇರಿಸಿಕೊಳ್ಳಲು ಅವರು ನಿರ್ಧರಿಸಿದ್ದಾರೆ. ನೂತನ ಸಚಿವರ ಪದಗ್ರಹಣ ಸಮಾರಂಭ ಶನಿವಾರ ನಡೆಯಲಿದೆ. ವಿಶೇಷವೆಂದರೆ, ದೇಶದಲ್ಲೇ ಇದೇ ಮೊದಲ ಬಾರಿಗೆ ಈ ಪ್ರಮಾಣದ ಉಪಮುಖ್ಯಮಂತ್ರಿಗಳನ್ನು ಸಂಪುಟಕ್ಕೆ ಸೇರಿಸಿಕೊಳ್ಳಲಾಗುತ್ತಿದೆ.

ಐವರು ಉಪಮುಖ್ಯಮಂತ್ರಿಗಳನ್ನು ಆಂಧ್ರಪ್ರದೇಶದ ಐದು ಭಾಗಗಳಿಂದ ಮತ್ತು ಐದು ಸಮುದಾಯದಿಂದ ಆಯ್ಕೆ ಮಾಡಲಾಗಿದೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ, ಅಲ್ಪಸಂಖ್ಯಾತ ಮತ್ತು ಕಾಪು ಸಮುದಾಯಕ್ಕೆ ನೀಡಲಾಗಿದೆ. ಇವರೆಲ್ಲರ ಅಧಿಕಾರಾವಧಿ ಎರಡೂವರೆ ವರ್ಷ ಮಾತ್ರ ಇರುತ್ತದೆ.